# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಸಿ & ಎ.ಜಿ. ವರದಿಯ ಕಂಡಿಕೆ ಸಂಖ್ಯೆ.2.13/2007-08ರ ಕಂಡಿಕೆಯಲ್ಲಿ ಸಮಿತಿಯು ಶಿಫಾರಸ್ಸಿನನ್ವಯ ಕಾಮಗಾರಿಯ ತನಿಖೆ ನಡೆಸಲು ಶ್ರೀ ಏಜಾಜ್ ಹುಸೇನ್, ಅಧೀಕ್ಷಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ, ಬಳ್ಳಾರಿ ಇವರನ್ನು ನಿಯೋಜಿಸುವ ಬಗ್ಗೆ.

ಓದಲಾಗಿದೆ:- ಕರ್ನಾಟಕ ವಿಧಾನ ಮಂಡಲದ ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ಸಮಿತಿಯ 2ನೇ ವರದಿ (2011-13) ಯಲ್ಲಿನ ಆಡಿಟ್ ಕಂಡಿಕೆ ಸಂಖ್ಯೆ 2.13/2007-08ರಲ್ಲಿನ ಶಿಫಾರಸ್ಸು.

ಪ್ರಸ್ತಾವನೆ:

ಕರ್ನಾಟಕ ವಿಧಾನ ಮಂಡಲದ ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ಸಮಿತಿಯ 2ನೇ ವರದಿ (2011-13) ಯಲ್ಲಿನ ಆಡಿಟ್ ಕಂಡಿಕೆ ಸಂಖ್ಯೆ 2.13/2007-08ರಲ್ಲಿ ಸಮಿತಿಯು ಈ ಕೆಳಕಂಡಂತೆ ಶಿಫಾರಸ್ಸು ಮಾಡಿರುತ್ತದೆ.

(1) *ಕೊಪ್ಪಳ ತಾಲ್ಲೂಕಿನ ಅಳವಂಡಿಯಲ್ಲಿ ದೋಷಪೂರಿತ ಮೆಟ್ರಿಕ್ ಪೂರ್ವ ಹೆಣ್ಣುಮಕ್ಕಳ ವಿದ್ಯಾರ್ಥಿ ನಿಲಯ ನಿರ್ಮಾಣ ಮಾಡಿರುವ ಅಧಿಕಾರಿಗಳ ವಿರುದ್ಧ ಕಾನೂನು ರೀತ್ಯಾ ಕಠಿಣ ಕ್ರಮ ಜರುಗಿಸಬೇಕೆಂದು ಶಿಫಾರಸ್ಸು ಮಾಡಿರುತ್ತದೆ.*

(2) *ಪ್ರಸ್ತುತ ವಿದ್ಯಾರ್ಥಿ ನಿಲಯದಿಂದ ವಿದ್ಯಾರ್ಥಿಗಳನ್ನು ಬೇರೊಂದು ಕಟ್ಟಡಕ್ಕೆ ಹಸ್ತಾಂತರ ಮಾಡದಿದ್ದಲ್ಲಿ ದೊಡ್ಡ ಪ್ರಮಾಣದ ಅನಾಹುತಕ್ಕೆ / ಜೀವಹಾನಿಗೆ ಕಾರಣವಾಗುತ್ತಿತ್ತು. ಆದುದರಿಂದ, ಕಟ್ಟಡ ನಿರ್ಮಾಣದಲ್ಲಿ ಅಧಿಕಾರಿಗಳು ಗಂಭೀರ ಲೋಪವೆಸಗಿದಂತಾಗಿರುವುದರಿಂದ ಸರ್ಕಾರವು ಅವರುಗಳ ವಿರುದ್ಧ ಕ್ರಿಮಿನಲ್ ದಾವೆಯನ್ನು ಸಹ ಹೂಡಬೇಕೆಂದು ಶಿಫಾರಸ್ಸು ಮಾಡಿರುತ್ತದೆ.*

(3) *ಶಿಥಿಲಗೊಂಡ ವಿದ್ಯಾರ್ಥಿನಿಲಯದ ಕಟ್ಟಡದ ಪಕ್ಕದಲ್ಲಿಯೇ ಮತ್ತೊಂದು ಕಟ್ಟಡ ನಿರ್ಮಿಸಲಾಗಿದ್ದು, ಆ ಕಟ್ಟಡದ ಕಾಮಗಾರಿಯು ಸಹ ಕಳಪೆಯಾಗಿದ್ದು, ಸದರಿ ಕಟ್ಟಡವನ್ನು ದುರಸ್ತಿ ಮಾಡಿ ವಿದ್ಯಾರ್ಥಿಗಳ ವಾಸಕ್ಕೆ ಪರ್ಯಾಯ ವ್ಯವಸ್ಥೆ ಮಾಡಲು ಯೋಗ್ಯವೇ ಎಂದು ತಿಳಿಯಲು ತಜ್ಞರಿಂದ ಪರೀಕ್ಷೆಗೆ ಒಳಪಡಿಸಿ ಮುಂದಿನ ಕ್ರಮ ಜರುಗಿಸಲು ಶಿಫಾರಸ್ಸು ಮಾಡಿರುತ್ತದೆ.*

ಮೇಲ್ಕಂಡ ಕಂಡಿಕೆಯಲ್ಲಿ ಶಿಫಾರಸ್ಸು ಮಾಡಿರುವಂತೆ ಈಗಾಗಲೇ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಶಿಸ್ತುಕ್ರಮ ಕೈಗೊಳ್ಳಲು ಪೂರಕವಾಗಿ ಕಡತ ಸಂಖ್ಯೆ ಗ್ರಾಅಪ 12 ಇಎನ್‌ಕ್ಯೂ 2012ರಲ್ಲಿ ಕಾರಣ ಕೇಳುವ ನೋಟೀಸಿನೊಂದಿಗೆ ದೋಷಾರೋಪಣಾ ಪಟ್ಟಿಯನ್ನು ಜಾರಿ ಮಾಡಿದ್ದು, ನಿವೃತ್ತ ಅಧಿಕಾರಿಗಳ ವಿರುದ್ಧ ಸಿವಿಲ್ ದಾವೆ ಹೂಡಲು ಮು.ಕಾ.ಅ. ರವರಿಗೆ ತಿಳಿಸಲಾಗಿರುತ್ತದೆ. ಪ್ರಸ್ತುತ ಸಮಿತಿಯು ನೀಡಿರುವ ವರದಿಯಲ್ಲಿ ಮೇಲೆ ಕ್ರಮ ಸಂಖ್ಯೆ 3ರಲ್ಲಿ

----2

ಶಿಫಾರಸ್ಸು ಮಾಡಿರುವಂತೆ *ಶಿಥಿಲಗೊಂಡ ವಿದ್ಯಾರ್ಥಿನಿಲಯದ ಕಟ್ಟಡದ ಪಕ್ಕದಲ್ಲಿಯೇ ಮತ್ತೊಂದು ಕಟ್ಟಡ ನಿರ್ಮಿಸಲಾಗಿದ್ದು, ಆ ಕಟ್ಟಡದ ಕಾಮಗಾರಿಯು ಸಹ ಕಳಪೆಯಾಗಿದ್ದು, ಸದರಿ ಕಟ್ಟಡವನ್ನು ದುರಸ್ತಿ ಮಾಡಿ ವಿದ್ಯಾರ್ಥಿಗಳ ವಾಸಕ್ಕೆ ಪರ್ಯಾಯ ವ್ಯವಸ್ಥೆ ಮಾಡಲು ಯೋಗ್ಯವೇ* ಎಂಬ ಬಗ್ಗೆ ತನಿಖೆ ನಡೆಸಲು ಶ್ರೀ ಏಜಾಜ್ ಹುಸೇನ್, ಅಧೀಕ್ಷಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ, ಬಳ್ಳಾರಿ ಇವರನ್ನು ನಿಯೋಜಿಸಲು ಸರ್ಕಾರವು ನಿರ್ಧರಿಸಿ ಈ ಮುಂದಿನಂತೆ ಆದೇಶಿಸಿದೆ.

<u>ಆದೇಶ ಸಂಖ್ಯೆ. ಗ್ರಾಅಪ 278 ಜಿಪಅ 2013, ಬೆಂಗಳೂರು,</u>
<u>ದಿನಾಂಕ.-17-09-2013</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ವಿಧಾನ ಮಂಡಲದ ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ಸಮಿತಿಯ 2ನೇ ವರದಿ (2011-13) ಯಲ್ಲಿನ ಆಡಿಟ್ ಕಂಡಿಕೆ ಸಂಖ್ಯೆ 2.13/2007-08ರಲ್ಲಿ ಸಮಿತಿಯು ಶಿಫಾರಸ್ಸು ಮಾಡಿರುವಂತೆ *ಶಿಥಿಲಗೊಂಡ ವಿದ್ಯಾರ್ಥಿನಿಲಯದ ಕಟ್ಟಡದ ಪಕ್ಕದಲ್ಲಿಯೇ ಮತ್ತೊಂದು ಕಟ್ಟಡ ನಿರ್ಮಿಸಲಾಗಿದ್ದು, ಆ ಕಟ್ಟಡದ ಕಾಮಗಾರಿಯು ಸಹ ಕಳಪೆಯಾಗಿದ್ದು, ಸದರಿ ಕಟ್ಟಡವನ್ನು ದುರಸ್ತಿ ಮಾಡಿ ವಿದ್ಯಾರ್ಥಿಗಳ ವಾಸಕ್ಕೆ ಪರ್ಯಾಯ ವ್ಯವಸ್ಥೆ ಮಾಡಲು ಯೋಗ್ಯವೇ* ಎಂಬ ಬಗ್ಗೆ ತನಿಖೆ ನಡೆಸಲು ಶ್ರೀ ಏಜಾಜ್ ಹುಸೇನ್, ಅಧೀಕ್ಷಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ, ಬಳ್ಳಾರಿ ಇವರನ್ನು ನಿಯೋಜಿಸಿದೆ.

ತನಿಖಾ ವರದಿಯನ್ನು 15 ದಿನಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸಲು ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಹೆಚ್.ಸಿ.ರಾಜಪ್ಪ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ:
1. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ರಿಸಾಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು,
2. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೊಪ್ಪಳ.
4. ಶ್ರೀ ಏಜಾಜ್ ಹುಸೇನ್, ಅಧೀಕ್ಷಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ, ಬಳ್ಳಾರಿ.
5. ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಕೊಪ್ಪಳ
6. ಗ್ರಾ.ಅ.ಪಂ.ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾಜ್)/ ಹೆಚ್ಚುವರಿ ಕಾರ್ಯದರ್ಶಿ ಇವರುಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ.
7. ಮೇಲ್ವಿಚಾರಕರು, ಗಣಕಯಂತ್ರ ವಿಭಾಗ, ಗ್ರಾ.ಅ.ಪಂ.ಇಲಾಖೆ ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸುವ ಸಲುವಾಗಿ.
8. ರಕ್ಷಾ ಕಡತ / ಮಾಹಿತಿ ಕೇಂದ್ರ/ ಹೆಚ್ಚುವರಿ ಪ್ರತಿಗಳು.